# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:25.02.2020**

## ಪ್ರತಿಷ್ಠಿತ ನಾಡಪ್ರಭು ಕೆಂಪೇಗೌಡ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಮಾರ್ಚ್ 10 ಕೊನೆ ದಿನ : ಪೂಜ್ಯ ಮಹಾಪೌರರು



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪ್ರತಿ ವರ್ಷ ಆಚರಿಸುವ ನಾಡಪ್ರಭು ಕೆಂಪೇಗೌಡ ದಿನಾಚರಣೆ ಕುರಿತು ಪೂಜ್ಯ ಮಹಾಪೌರರು ರವರ ಅಧ್ಯಕ್ಷತೆ ಹಾಗೂ ಮಾನ್ಯ ಪಾಲಿಕೆ ಆಯುಕ್ತರು ರವರ ಘನ ಉಪಸ್ಥಿತಿಯಲ್ಲಿ ಇಂದು ಪಾಲಿಕೆ ಕೇಂದ್ರ ಕಛೇರಿ, ಸಭಾಂಗಣ-01ರಲ್ಲಿ ಪೂರ್ವಭಾವಿ ಸಭೆ ನಡೆಯಿತು. ಈ ವೇಳೆ ಮಾನ್ಯ ಆಡಳಿತ ಪಕ್ಷದ ನಾಯಕರು ಶ್ರೀ ಮುನೀಂದ್ರ ಕುಮಾರ್, ಮಾನ್ಯ ವಿರೋಧ ಪಕ್ಷದ ನಾಯಕರು ಶ್ರೀ ಅಬ್ದುಲ್ ವಾಜೀದ್, ಮಾನ್ಯ ಜೆಡಿಎಸ್ ಪಕ್ಷದ ನಾಯಕರು ಶ್ರೀಮತಿ ನೇತ್ರಾ ನಾರಾಯಣ್, ಮಾನ್ಯ ವಿವಿಧ ಸ್ಥಾಯಿ ಸಮಿತಿ ಅಧ್ಯಕ್ಷರುಗಳು, ವಿಶೇಷ ಆಯುಕ್ತರು(ಘನತ್ಯಾಜ್ಯ ವಿಭಾಗ) ಶ್ರೀ ಡಿ.ರಂದೀಪ್, ಉಪ ಆಯುಕ್ತರು(ಆಡಳಿತ) ಶ್ರೀ ಲಿಂಗಮೂರ್ತಿ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪ್ರತಿ ವರ್ಷ ಆಚರಿಸುವ **ಪ್ರತಿಷ್ಠಿತ ನಾಡಪ್ರಭು ಕೆಂಪೇಗೌಡ ದಿನಾಚರಣೆ**ಯನ್ನು ಪ್ರತೀತಿಯಂತೆ ಕರಗ ಮಹೋತ್ಸವದ ದಿನ ದಿನಾಂಕ:08/04/2020 ರಂದು(ಬುಧವಾರ) ಆಚರಣೆ ಮಾಡಲು ನಿರ್ಧರಿಸಲಾಗಿದ್ದು, ಪ್ರಸಕ್ತ ಸಾಲಿನ ನಾಡಪ್ರಭು ಕೆಂಪೇಗೌಡ ಪ್ರಶಸ್ತಿಗೆ ಅರ್ಜಿಯನ್ನು ದಿನಾಂಕ:10/03/2020ರೊಳಗೆ ಪಾಲಿಕೆ ಕೇಂದ್ರ ಕಛೇರಿಯಲ್ಲಿ ಸಲ್ಲಿಸಬಹುದಾಗಿರುತ್ತದೆ ಎಂದು ಮಹಾಪೌರರು ತಿಳಿಸಿದರು.

ಪೂರ್ವಭಾವಿ ಸಭೆಯ ನಂತರ ಸುದ್ದಿಗಾರರೊಂದಿಗೆ ಮಹಾಪೌರರು ಮಾತನಾಡಿ, ಪಾಲಿಕೆ ವತಿಯಿಂದ ಪ್ರತಿವರ್ಷವೂ ಪ್ರತಿಷ್ಠಿತ ನಾಡಪ್ರಭು ಕೆಂಪೇಗೌಡ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಈ ಬಾರಿ ಇನ್ನೂ ವಿಭಿನ್ನ ರೀತಿಯಲ್ಲಿ ಆಚರಣೆ ಮಾಡಲು ಕ್ರಮವಹಿಸಲಾಗುವುದು. ಈ ನಿಟ್ಟಿನಲ್ಲಿ ಮಾಗಡಿ ಕೆಂಪಾಪುರ ಗ್ರಾಮದಿಂದ ಜ್ಯೋತಿ ತರುವ ಸ್ಥಳಕ್ಕೆ ಶೀಘ್ರ ಭೇಟಿ ನೀಡಿ ತಪಾಸಣೆ ನಡೆಸಲಾಗುವುದು ಎಂದು ಹೇಳಿದರು.

ಕೆಂಪೇಗೌಡ ದಿನಾಚರಣೆ ಆಚರಿಸುವ ಸಂಬಂಧ ಶೀಘ್ರ ಮತ್ತೊಂದು ಸಭೆ ನಡೆಸಿ ಕೆಂಪೇಗೌಡ ದಿನಾಚರಣೆಯನ್ನು ಅಚ್ಚುಕಟ್ಟಾಗಿ ನಡೆಸಲು ಬೇಕಾದ ಎಲ್ಲಾ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳು ಕ್ರಮವಹಿಸಲಾಗುವುದು. ಈ ಪೈಕಿ ಸ್ವಾಗತ ಮತ್ತು ಸನ್ಮಾನ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಿತಿ, ವೇದಿಕೆ ಮತ್ತು ದೀಪಾಲಂಕಾರ ಸಮಿತಿ, ಕ್ರೀಡಾ/ಚಿತ್ರಕಲೆ ಹಾಗೂ ರಂಗೋಲಿ ಸ್ಪರ್ಧೆ ಸಮಿತಿ, ಊಟೋಪಚಾರ ಸಮಿತಿ, ಉತ್ತಮ ಅಧಿಕಾರಿ/ನೌಕರರ ಆಯ್ಕೆ ಹಾಗೂ ಸನ್ಮಾನ ಸಮಿತಿ, ಪ್ರಶಸ್ತಿ ಪುರಸ್ಕೃತರ ಆಯ್ಕೆ ಸಮಿತಿಯನ್ನು ರಚನೆ ಮಾಡಲಾಗುವುದು ಎಂದು ತಿಳಿಸಿದರು.

ಡಾ॥ ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚರಣೆ ಆಚರಿಸುವ ಸಂಬಂಧ ಕೂಡ ಶೀಘ್ರ ಸಭೆ ಕರೆದು ಚರ್ಚಿಸಲಾಗವುದು. ಕೆಂಪೇಗೌಡ ದಿನಾಚರಣೆ ಆಚರಣೆ ಮಾಡುವ ದಿನದಿಂದ(ಏಪ್ರಿಲ್ 8 ರಿಂದ ಏಪ್ರಿಲ್ 14 ರವರೆಗೆ) ಡಾ॥ ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚರಣೆ ದಿನದವರೆಗೂ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಚಿಂತನೆಯಿದೆ. ಇಡೀ ಬೆಂಗಳೂರಿನಾದ್ಯಂತ ಸಂಭ್ರಮದ ರೀತಿಯಲ್ಲಿ ಆಚರಣೆ ಮಾಡಲು ಕ್ರಮವಹಿಸಲಾಗುವುದು ಎಂದು ಹೇಳಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**